ಬೆಂಗಳೂರಿನಲ್ಲಿ ಪ್ರತ್ಯೇಕ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸುವ ಬಗ್ಗೆ.

2412(3400) ಶ್ರೀ ರಾಮಲಿಂಗರೆಡ್ಡಿ (ಜಯನಗರ) :— ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಪ್ರತಿದಿನ ಬಳಕೆಯಾಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು;

ಆ) ಇದರ ಪೈಕಿ ಬೆಂಗಳೂರು ನಗರದಲ್ಲಿ ಪ್ರತಿದಿನ ಶೇಕಡಾ ಎಷ್ಟು ಪ್ರಮಾಣದಲ್ಲಿ ವಿದ್ಯುತ್ ಬಳಕೆಯಾಗುತ್ತಿದೆ.

ಇ) ಬೆಂಗಳೂರಿಗಾಗಿಯೇ ಪ್ರತ್ಯೇಕ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಈ) ಇಲ್ಲದಿದ್ದಲ್ಲಿ ಸರ್ಕಾರ ಈ ಬಗ್ಗೆ ಪರಿಶೀಲಿಸುತ್ತದೆಯೇ?

ಶ್ರೀ ವೀರಕುಮಾರ ಅ. ಪಾಟೀಲ್ (ಇಂಧನ ರಾಜ್ಯ ಸಚಿವರು) :—

ಅ) ರಾಜ್ಯದಲ್ಲಿ ಹಾಲಿ ಪ್ರತಿದಿನ ಬಳಕೆಯಾಗುತ್ತಿರುವ ವಿದ್ಯುತ್ ಪ್ರಮಾಣ ಸರಾಸರಿ ಸುಮಾರು 80 ಮಿಲಿಯನ್ ಯೂನಿಟ್‌ಗಳು.

ಆ) ಇದರ ಪೈಕಿ ಬೆಂಗಳೂರು ನಗರದಲ್ಲಿ ಪ್ರತಿದಿನ ಸರಾಸರಿ 14.06 ಮಿಲಿಯನ್ ಯೂನಿಟ್ಟುಗಳಷ್ಟು ವಿದ್ಯುತ್ ಬಳಕೆಯಾಗುತ್ತಿದ್ದು, ಇದು ರಾಜ್ಯ ಒಟ್ಟು ವಿದ್ಯುತ್ ಬಳಕೆಯ ಶೇ.17.57 ರಷ್ಟಾಗಿರುತ್ತದೆ.

ಇ) ಬೆಂಗಳೂರು ನಗರದ ಹೊರವಲಯದಲ್ಲಿ ಬಿಡದಿ ಹಾಗೂ ಕಣಮಿಣಕೆಗಳಲ್ಲಿ ಒಟ್ಟು ಮೂರು ವಿದ್ಯುತ್ ಉತ್ಪಾದನಾ ಘಟಕಗಳನ್ನು ಖಾಸಗೀ : ಸಾರ್ವಜನಿಕ ಕ್ಷೇತ್ರದಲ್ಲಿ ಸ್ಥಾಪಿಸಲು, ಸರ್ಕಾರವು ಒಪ್ಪಿಗೆ ನೀಡಿದೆ.

ರಾಜ್ಯದಲ್ಲಿ ನಕಲಿ ಪಡಿತರ ಚೀಟಿಗಳನ್ನು ತಡೆಗಟ್ಟುವುದು.

2413(3401) ಶ್ರೀ ರಾಮಲಿಂಗಾರೆಡ್ಡಿ (ಜಯನಗರ) :— ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ನಕಲಿ ಪಡಿತರ ಚೀಟಿಗಳು ಚಾಲನೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಅ) ಹಾಗಿದ್ದಲ್ಲಿ ಇಲ್ಲಿಯವರೆಗೆ ಎಷ್ಟು ನಕಲಿ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದೆ?

ಇ) ನಕಲಿ ಪಡಿತರ ಚೀಟಿಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :—

ಅ) ಬಂದಿದೆ.

ಆ) ದಿನಾಂಕ 1.4.2000 ರಿಂದ ಮೇ 2001ರ ವರೆಗೆ 2,83,515 ನಕಲಿ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ರದ್ದುಪಡಿಸಲಾಗಿದೆ.

ಇ) ನಕಲಿ ಪಡಿತರ ಚೀಟಿಗಳನ್ನು ತಡೆಗಟ್ಟುವ ಉದ್ದೇಶದಿಂದ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ವಿತರಿಸಲಾಗುವ ಪಡಿತರ ಚೀಟಿಗಳನ್ನು ಗಣಕೀಕರಿಸಲು ಸರ್ಕಾರದ ಆದೇಶ ಸಂಖ್ಯೆ : ಎಫ್‌ಸಿಎಸ್ 275 ಡಿಆರ್‌ಎ 99ರ ದಿನಾಂಕ: 10.12.1999ರಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಪ್ರಥಮವಾಗಿ ಪಡಿತರ ಚೀಟಿಗಳ ಗಣಕೀಕರಣ ಪ್ರಕ್ರಿಯೆಯನ್ನು ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶ ಹಾಗೂ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಗ್ರಾಮಾಂತರ ಪ್ರದೇಶದಲ್ಲಿ ಪ್ರಾರಂಭಿಸಿ, ಗಣಕೀಕೃತ ಪಡಿತರ ಚೀಟಿ ವಿತರಣೆ ಪ್ರಗತಿಯಲ್ಲಿರುತ್ತದೆ. ಈ ಯೋಜನೆಯನ್ನೆ ರಾಜ್ಯದ ಇತರ ಪ್ರದೇಶಗಳಿಗೆ ಹಂತ ಹಂತವಾಗಿ ವಿತರಿಸಲಾಗುವುದು. ಈ ಯೋಜನೆಯ ಅನುಷ್ಠಾನದಿಂದ ನಕಲಿ ಪಡಿತರ ಚೀಟಿಗಳನ್ನು ತೆಗೆದು ಹಾಕಲು ಅನುಕೂಲವಾಗುವುದು.

ರಾಜ್ಯ ಸರ್ಕಾರದ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ಹಳದಿ ಪಡಿತರ ಚೀಟಿಗಳನ್ನು ವಿತರಿಸುವ ಯೋಜನೆಯನ್ನು ಜಾರಿಗೊಳಿಸಿದ್ದು, ಈ ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಅನರ್ಹ ಕುಟುಂಬಗಳು ಹೊಂದಿರುವ ಹಸಿರು ಪಡಿತರ ಚೀಟಿಗಳನ್ನು ರದ್ದುಪಡಿಸಲು ಕ್ರಮ ವಹಿಸಲಾಗುವುದು.

ನಕಲಿ ಪಡಿತರ ಚೀಟಿಗಳನ್ನು ಗುರುತಿಸಿ ರದ್ದುಪಡಿಸುವುದು ನಿರಂತರ ಕಾರ್ಯವಾಗಿದ್ದು ಕಾರ್ಯಕಾರಿ ಸಿಬ್ಬಂದಿಗಳು ನ್ಯಾಯಬೆಲೆ ಅಂಗಡಿಗಳ ಸಂಪೂರ್ಣ ತನಿಖೆ ಹಾಗೂ ಸ್ಥಳೀಯ ವಿಚಾರಣೆ ನಡೆಸಿ ನಕಲಿ ಪಡಿತರ ಚೀಟಿಗಳನ್ನು ರದ್ದುಪಡಿಸಲು ಕ್ರಮ ವಹಿಸಿರುತ್ತಾರೆ.